**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 17/2022** **CW-2 PW-2**

**ಸಾಕ್ಷಿಯನ್ನು ದಿಃ 09.07.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಕಾಂತರಾಜು |
| ತಂದೆಯ ಹೆಸರುಃ | ಹನುಮೇಗೌಡ |
| ವಯಸ್ಸುಃ | 48 ವರ್ಷ |
| ವೃತ್ತಿಃ | ಅಟೋ ಚಾಲಕ |
| ವಾಸ ಸ್ಥಳಃ | ಕುರುವಂಕ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ನೋಟೀಸು, ಶೋಧನಾ ಸಮುಚಿತ ಆಧಾರ, ಸ್ಥಳ ಮಹಜರ್ ಮತ್ತು ಮಾದರಿ ಶೀಲಿನ ನಕಲನ್ನು ತೋರಿಸಲಾಗಿ, ಅವುಗಳನ್ನು ನೋಡಿ ಗುರುತಿಸಿದ್ದು, ಶೋಧನಾ ಸಮುಚಿತ ಆಧಾರ, ಸ್ಥಳ ಮಹಜರ್ ಮತ್ತು ಮಾದರಿ ಶೀಲಿನ ನಕಲು ಈಗಾಗಲೇ ನಿಪಿ-1 ರಿಂದ 3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) , 2(ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನೋಟೀಸನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು 6(ಎ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಸುಮಾರು 2 ವರ್ಷಗಳ ಹಿಂದೆ ಅಬಕಾರಿ ಕಛೇರಿಯಲ್ಲಿ ಮಾಡಿರುತ್ತೇನೆ. ಯಾವ ಉದ್ದೇಶಕ್ಕೆ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಆಗ ಸಮಯ ಮ. 12.30 ರಿಂದ 1.00 ಗಂಟೆ ಆಗಿರಬಹುದು. ನನ್ನ ಜೊತೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ಗೊತ್ತಿಲ್ಲ .

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 09.06.2021 ರಂದು ಮಧ್ಯಾಹ್ನ 3.45 ರಿಂದ 4.50 ಗಂಟೆ ಸಮಯದಲ್ಲಿ ನಾನು ಹಾಜರಿದ್ದು, ಪೋಲೀಸರು ಘಟನಾ ಸ್ಥಳದಲ್ಲಿ ತಯಾರಿಸಿದ ಸ್ಥಳ ಮಹಜರ್ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಸುವಕ್ಷಮ ಪೋಲೀಸರು ಮು.ಮಾ. 1 ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ದಿಃ 29.07.2021 ರ ಹೇಳಿಕೆಯನ್ನು ಓದಿ ಹೇಳಲಾಗಿ ಹಲ್ಲಗಳೆದದ್ದು ಅದನ್ನು ನಿಪಿ–7 ಎಂದು ಗುರುತಿಸಲಾಯಿತು. ಸದರಿ ಸ್ಥಳ ಮತ್ತು ಸಮಯದಂದು ನಾನು ಹಾಜರಿದ್ದು, ಪೋಲೀಸರು ನನ್ನ ಸಮಕ್ಷಮ ಮು.ಮಾ 1 ನ್ನು ವಶಪಡಿಸಿಕೊಂಡಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಆರ್ ಜಿ ರವರಿಂದ ಃ</u>**

ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ನಿವೇದಿಸಿಕೂಂಡಿದ್ದು ಅನುವತಿಸಲಾಯಿತು.

**ಮರು ವಿಚಾರಣೆ ಃ ಇಲ್ಲ.**

**<u>(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).</u>**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ .)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**